ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಪೂರಕ ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 24ನೇ ಮಾರ್ಚ್, 2022

(ಐಟಂ 2ರ ನಂತರ ಈ ಕೆಳಕಂಡ ವಿಷಯವನ್ನು ಸೇರಿಸಿಕೊಳ್ಳತಕ್ಕದ್ದು)

2ಎ. ಅಧಿಕೃತ ನಿರ್ಣಯ

ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು ಈ ಕೆಳಕಂಡ ಅಧಿಕೃತ ನಿರ್ಣಯವನ್ನು ಮಂಡಿಸುವುದು:–

1. ಕರ್ನಾಟಕ ರಾಜ್ಯವು ಯೋಜಿಸಿರುವ ಮೇಕೆದಾಟು ಕುಡಿಯುವ ನೀರು ಮತ್ತು ಸಮತೋಲನ ಜಲಾಶಯ ಯೋಜನೆಯನ್ನು ವಿರೋಧಿಸಿ ದಿನಾಂಕ: 21.03.2022 ರಂದು ತಮಿಳುನಾಡು ವಿಧಾನ ಸಭೆಯು ಸಭ್ಯವಲ್ಲದ ಭಾಷೆಯಲ್ಲಿ ಅಂಗೀಕರಿಸಿದ ಒಕ್ಕೂಟ ವಿರೋಧಿ ಮತ್ತು ಸಮರ್ಥನೀಯವಲ್ಲದ ನಿರ್ಣಯವನ್ನು ಮತ್ತು ತಮಿಳುನಾಡು ರಾಜ್ಯವು ತನ್ನ ಪ್ರಾದೇಶಿಕ ವ್ಯಾಪ್ತಿಯಲ್ಲಿ ಏಕಪಕ್ಷೀಯವಾಗಿ ಯೋಜಿಸಿರುವ ಕಾನೂನುಬಾಹಿರ ಯೋಜನೆಗಳನ್ನು ಸಹ ಈ ಸದನವು ಗಣನೆಗೆ ತೆಗೆದುಕೊಂಡಿರುತ್ತದೆ.

2. ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯವು ಕಾವೇರಿ ಜಲ ವಿವಾದ ನ್ಯಾಯಾಧಿಕರಣದ ತೀರ್ಪನ್ನು ಮಾರ್ಪಡಿಸಿ ಸಾಮಾನ್ಯ ಜಲ ವರ್ಷದಲ್ಲಿ ಬಿಳಿಗುಂಡ್ಲುವಿನಲ್ಲಿ 177.25 ಟಿಎಂಸಿ ನೀರಿನ ಪ್ರಮಾಣವನ್ನು ಖಚಿತಪಡಿಸುವಂತೆ ನಿಗದಿಪಡಿಸಿದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯವು ಹಂಚಿಕೆ ಮಾಡಿರುವಂತೆ ಬೆಂಗಳೂರು ಮೆಟ್ರೋಪಾಲಿಟನ್ ನಗರದ ಕುಡಿಯುವ ನೀರಿನ ಅಗತ್ಯತೆಗೆ 24 ಟಿಎಂಸಿ (4.75 ಟಿಎಂಸಿ Consumptive Use) ನೀರನ್ನು ಸುಸ್ಥಿರಗೊಳಿಸಲು ಹಾಗೂ ತತ್ಪರಿಮಾಣವಾಗಿ ಜಲವಿದ್ಯುತ್ ಉತ್ಪಾದನೆಗೆ ಅಂತರ್-ರಾಜ್ಯ ನದಿ ಕಾವೇರಿಗೆ ಅಡ್ಡಲಾಗಿ ಮೇಕೆದಾಟು ಕುಡಿಯುವ ನೀರು ಮತ್ತು ಸಮತೋಲನ ಜಲಾಶಯ ಯೋಜನೆಯನ್ನು ಯೋಜಿಸಲಾಗಿದೆ. ಸದರಿ ಯೋಜನೆಯಿಂದ ತಮಿಳುನಾಡು ರಾಜ್ಯಕ್ಕೆ ಯಾವುದೇ ಭಾದಕ ಅಥವಾ ಹಾನಿಯಾಗುವುದಿಲ್ಲ.

3. ಮೇಕೆದಾಟು ಕುಡಿಯುವ ನೀರು ಮತ್ತು ಸಮತೋಲನ ಜಲಾಶಯ ಯೋಜನೆಯನ್ನು ನಿರ್ಮಿಸಲು ಕರ್ನಾಟಕ ರಾಜ್ಯವು ತನ್ನ ಸಾಂವಿಧಾನಿಕ ಅಧಿಕಾರ ವ್ಯಾಪ್ತಿಯನ್ನು ಹೊಂದಿದೆ. ರಾಷ್ಟ್ರೀಯ ಜಲನೀತಿಯೂ ಸಹ ಕುಡಿಯುವ ನೀರಿಗೆ ಪ್ರಥಮ ಆದ್ಯತೆಯನ್ನು ನೀಡುತ್ತದೆ. ಈ ಕುಡಿಯುವ ನೀರಿನ ಯೋಜನೆಯಿಂದ ನ್ಯಾಯಾಧಿಕರಣದ ಆದೇಶವನ್ನು ಯಾವುದೇ ರೀತಿಯಲ್ಲಿ ಉಲ್ಲಂಘಿಸುವುದಿಲ್ಲ.

... 2/

4. ಕರ್ನಾಟಕದ ಪ್ರಾದೇಶಿಕ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಕಾವೇರಿ ಹೆಚ್ಚುವರಿ ನೀರನ್ನು ಬಳಸಿಕೊಳ್ಳುವ ಮೂಲಕ ತಮಿಳುನಾಡು ರಾಜ್ಯವು ಏಕಪಕ್ಷೀಯವಾಗಿ ಹಲವಾರು ಕಾನೂನುಬಾಹಿರ ಯೋಜನೆಗಳನ್ನು ಕೈಗೆತ್ತಿಕೊಂಡಿದೆ. ಈ ಯೋಜನೆಗಳಲ್ಲಿ ಕುಂದಾ PSP, ಸಿಲ್ಲಹಳ್ಳ PSP, ಹೊಗೇನಕಲ್ ಹಂತ-II, ಕಾವೇರಿ (ಕಟ್ಟಲೈ) - ವೈಗೈ - ಗುಂಡಾರ್ ಜೋಡಣೆ, ಇತ್ಯಾದಿಗಳು ಒಳಗೊಂಡಿವೆ.

5. ಪೆನಿನ್ಸುಲರ್ ರಿವರ್ ಡೆವಲಪ್‌ಮೆಂಟ್ (Peninsular River Development) ಯೋಜನೆಯಡಿಯಲ್ಲಿ ಗೋದಾವರಿ ಹೆಚ್ಚುವರಿ ನೀರನ್ನು ಕೃಷ್ಣಾ-ಪೆನ್ನಾರ್-ಕಾವೇರಿ-ವೈಗೈ-ಗುಂಡಾರ್ ಯೋಜನೆಗೆ ತಿರುವುಗೊಳಿಸುವ ವಿಸ್ತೃತ ಯೋಜನಾ ವರದಿಯನ್ನು ಕರ್ನಾಟಕ ರಾಜ್ಯವು ಸೇರಿದಂತೆ ಕಣಿವೆ ರಾಜ್ಯಗಳ ನೀರಿನ ಪಾಲನ್ನು ನಿರ್ಧರಿಸುವವರೆಗೆ ಅನುಮೋದಿಸಕೂಡದು.

6. ತಮಿಳುನಾಡು ರಾಜ್ಯವು, ಕರ್ನಾಟಕ ರಾಜ್ಯದ ಮೇಕೆದಾಟು ಯೋಜನೆಗೆ ತನ್ನ ಒಪ್ಪಿಗೆಯನ್ನು ಪಡೆಯಬೇಕೆಂದು ಕೋರಿದೆ. ಆದರೆ ಅದೇ ಸಮಯದಲ್ಲಿ ತಮಿಳುನಾಡು ರಾಜ್ಯವು ಕರ್ನಾಟಕದ ರಾಜ್ಯದ ಒಪ್ಪಿಗೆಯನ್ನು ಕೋರದೆ ಏಕಪಕ್ಷೀಯವಾಗಿ ಕಾನೂನುಬಾಹಿರ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಮೂಲಕ ತನ್ನ ದ್ವಂದ್ವ ನಿಲುವನ್ನು ಪ್ರದರ್ಶಿಸುತ್ತಿದೆ. ತಮಿಳುನಾಡಿನ ಕಾನೂನುಬಾಹಿರ ಯೋಜನೆಗಳನ್ನು ನಾವು ಬಲವಾಗಿ ಖಂಡಿಸುತ್ತಾ, ಎಲ್ಲಾ ವೇದಿಕೆಗಳಲ್ಲಿ ಅವುಗಳನ್ನು ವಿರೋಧಿಸುತ್ತೇವೆ.

7. ಕೇಂದ್ರ ಜಲ ಆಯೋಗವು ಮೇಕೆದಾಟು ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ಅನುಮೋದಿಸುವಂತೆ ಹಾಗೂ ಪರಿಸರ ಮತ್ತು ಅರಣ್ಯ ಮಂತ್ರಾಲಯವು ಯೋಜನೆಗೆ ಪರಿಸರ ಅನುಮತಿಯನ್ನು ಪಡೆಯಲು ToR ಅನ್ನು ಅನುಮೋದಿಸುವಂತೆ ಈ ಸದನವು ಸರ್ವಾನುಮತದಿಂದ ಒತ್ತಾಯಿಸುತ್ತದೆ.

ಈ ಮೇಲಿನ ಅಂಶಗಳ ಹಿನ್ನೆಲೆಯಲ್ಲಿ, ಈ ಸದನವು ಸರ್ವಾನುಮತದಿಂದ ಈ ಮುಂದಿನಂತೆ ನಿರ್ಣಯಿಸುತ್ತದೆ:

ಅ. ತಮಿಳುನಾಡು ರಾಜ್ಯಕ್ಕೆ ಯಾವುದೇ ಹಾನಿಯಾಗದ ಮೇಕೆದಾಟು ಯೋಜನೆಯನ್ನು ವಿರೋಧಿಸಿ ತಮಿಳುನಾಡು ವಿಧಾನಸಭೆ ಅಂಗೀಕರಿಸಿದ ನಿರ್ಣಯವನ್ನು ಖಂಡಿಸುತ್ತದೆ.

ಆ. ಮೇಕೆದಾಟು ಯೋಜನೆಗೆ ಈ ಕೂಡಲೇ ಅನುಮತಿ ನೀಡುವಂತೆ ಕೇಂದ್ರ ಜಲ ಆಯೋಗ (Central Water Commission) ಹಾಗೂ ಪರಿಸರ ಮತ್ತು ಅರಣ್ಯ ಮಂತ್ರಾಲಯ (MoEF) ವನ್ನು ಒತ್ತಾಯಿಸುತ್ತದೆ.

ಇ. ಕಣಿವೆ ರಾಜ್ಯಗಳ ನ್ಯಾಯಸಮ್ಮತ ಪಾಲನ್ನು ನಿರ್ಧರಿಸುವವರೆಗೆ ಗೋದಾವರಿ–ಕೃಷ್ಣಾ–ಪೆನ್ನಾರ್–ಕಾವೇರಿ–ವೈಗೈ–ಗುಂಡಾರ್ ಜೋಡಣೆ ಯೋಜನೆಯ ಡಿಪಿಆರ್ ಅನ್ನು ಅಂತಿಮಗೊಳಿಸದಂತೆ ಹಾಗೂ ತಮಿಳುನಾಡಿನ ಕಾನೂನುಬಾಹಿರ ಯೋಜನೆಗಳಿಗೆ ಅನುಮೋದನೆ ನೀಡದಂತೆ ಮತ್ತು ಆ ಯೋಜನೆಗಳನ್ನು ಮುಂದುವರೆಸದಂತೆ ನಿರ್ದೇಶಿಸಲು ಸಂಬಂಧಪಟ್ಟ ಕೇಂದ್ರದ ಸಂಸ್ಥೆಗಳನ್ನು ಒತ್ತಾಯಿಸುತ್ತದೆ.

... 3/

(ಐಟಂ 3ರ ನಂತರ ಈ ಕೆಳಕಂಡ ವಿಷಯವನ್ನು ಸೇರಿಸಿಕೊಳ್ಳತಕ್ಕದ್ದು)

3ಎ. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿ) ಅವರು:-

ಅ) 2022ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿ) ಅವರು:-

ಅ) 2022ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
